# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಹೊಸಕೆರೆಹಳ್ಳಿ, ಬೆಂಗಳೂರು

---

ಸಂ: ಸ.ಅ/ವಾ-161/ಪಿ.ಆರ್/ 63 / 161 /2021-22 ದಿನಾಂಕ : 23-07-2021

## ವಾರ್ಡ್ ಸಮಿತಿ (WDC) ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್‌ನ ದಿನಾಂಕ :23-07-2021 ರಂದು ನಡೆದ ಸಭೆಯ ನಡವಳಿಗಳು

**ವಿಷಯ:-** ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳೀ ವಾರ್ಡ್ DETER ಸಮಿತಿ (WDC)ಸಭೆಯ ನಡವಳಿ.

**ಉಲ್ಲೇಖ:-**1. ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ :ಸಂ RD 158 TNR 2020 ದಿನಾಂಕ :07-05-2021

******

ಉಲ್ಲೇಖ (1) ರ ಸಭಾ ಸೂಚನಾ ಪತ್ರದ ಅನುಸಾರ ಆದೇಶದ ಅಂಶಗಳನ್ನು ಪಾಲಿಸಲು ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :23-07-2021 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 11.00 ಗಂಟೆಗೆ ಶ್ರೀ ಧರಣೇಂದ್ರಕುಮಾರ್, ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಮಲವಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾದ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಶ್ರೀ ಧರಣೇಂದ್ರಕುಮಾರ್, ನೋಡೆಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ-161 ರಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

**ಯೋಜನೆ ವಿಭಾಗ ;-**

1) ವಾರ್ಡ್ ಸಂಖ್ಯೆ-161 ರ ದತ್ತಾತ್ರೇಯನಗರದಲ್ಲಿ ನಡೆಯುತ್ತಿರುವ ಮಳೆ ನೀರುಗಾಲುವೆಯ ತಡೆಗೋಡೆಯ ಕಾಮಗಾರಿಯನ್ನು ಅತಿ ಶೀಘ್ರವಾಗಿ ಮುಗಿಸಲು ಸೂಚಿಸಲಾಗಿರುತ್ತದೆ.
2) ಬೃಹತ್ ನೀರುಗಾಲುವೆ ಹೊಂದಿಕೊಂಡಂತೆ ಇರುವ ಮನೆಗಳಿಗೆ ನೋಟೀಸ್ ನೀಡುವ ಬಗ್ಗೆ ಚರ್ಚಿಸಲಾಗಿದೆ.
3) ದತ್ತಾತ್ರೇಯ ದೇವಸ್ಥಾನದ ಎದುರು ನಿರ್ಮಿಸುತ್ತಿರುವ ಚರಂಡಿ ಕಾಮಗಾರಿಯನ್ನು ದಿನಾಂಕ :05-08-2021 ರೊಳಗೆ ಮುಗಿಸುವುದಾಗಿ ಸಭೆಯಲ್ಲಿ ದೊಡ್ಡ ಮಳೆ ನೀರುಗಾಲುವೆಯ ಅಧಿಕಾರಿಗಳಿಗೆ ನಿಗದಿಪಡಿಸಲಾಗಿದೆ.
4) ಬೃಹತ್ ನೀರುಗಾಲುವೆಯ ಗೋಡೆಯ ಮೇಲೆ ಚೈನ್‌ಲಿಂಕ್ ಅಳವಡಿಸುವ ಬಗ್ಗೆ ಚರ್ಚಿಸಲಾಯಿತು.

**ಕಂದಾಯ ಇಲಾಖೆ ;-**

5) ಹೊಸಕೆರೆಹಳ್ಳಿಯಲ್ಲಿ ಇರುವ ರುದ್ರಭೂಮಿಯನ್ನು ಅಳತೆ ಮಾಡಿಸುವುದು ಮತ್ತು ಇದಕ್ಕೆ ಪಿ.ಐ.ಡಿ ಸಂಖ್ಯೆ ನೀಡುವ ಬಗ್ಗೆ ಕಂದಾಯ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

6) ಮತದಾರರ ಗುರುತಿನ ಚೀಟಿ ನೀಡುವ ಬಗ್ಗೆ ಚರ್ಚಿಸಲಾಗಿರುತ್ತದೆ.

**ವಿದ್ಯುತ್ ಇಲಾಖೆ ;-**

7) ವಾರ್ಡ್‌ನಲ್ಲಿ ಬೀದಿ ದೀಪ ನಿರ್ವಹಣೆಯ ಗುತ್ತಿಗೆದಾರರೊಂದಿಗೆ ಚರ್ಚಿಸಿ ವಾರ್ಡ್‌ನಲ್ಲಿ ಇರುವ ಎಲ್ಲಾ ಬೀದಿ ದೀಪಗಳನ್ನು ಸುಸ್ಥಿತಿಯಲ್ಲಿ ಇಡುವ ಬಗ್ಗೆ ಚರ್ಚಿಸಲಾಗಿರುತ್ತದೆ.

**ಬೆಸ್ಕಾಂ ಇಲಾಖೆ ;-**

8) ಬೆಸ್ಕಾಂ ವತಿಯಿಂದ ಹಾಕಲಾಗುತ್ತಿರುವ ಹೆಚ್.ಡಿ.ಡಿ ಕೇಬಲ್ ಗುಂಡಿಗಳನ್ನು ತುರ್ತಾಗಿ ಮುಚ್ಚಲು ಸೂಚಿಸಲಾಗಿರುತ್ತದೆ.

9) ಮೂಕಾಂಬಿಕಾನಗರ ರಸ್ತೆಯಲ್ಲಿ ಕೇಬಲ್ ಅಳವಡಿಸಲು ತೆಗೆಯಲಾಗಿರುವ ರಸ್ತೆ ಗುಂಡಿಗಳನ್ನು ಸರಿಪಡಿಸಲು ಸೂಚಿಸಲಾಗಿರುತ್ತದೆ.

**ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ;-**

10) ಮ್ಯಾನ್‌ಹೋಲ್ ಸ್ವಚ್ಛ ಮಾಡಿದ ಮಣ್ಣನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದಲೇ ತೆರವುಗೊಳಿಸುವ ಬಗ್ಗೆ ಚರ್ಚಿಸಲಾಗಿದ್ದು, ಸಭೆಯಲ್ಲಿದ್ದ ಅಧಿಕಾರಿಗಳು ಇದಕ್ಕೆ ಒಪ್ಪಿರುತ್ತಾರೆ.

**ಯೋಜನೆ ಇಲಾಖೆ ;-**

11) ತಾತ್ಕಾಲಿಕ ಎ.ಸಿ ಶೀಟ್ ಮನೆಯನ್ನು ಸಮುದಾಯ ಭವನದ 2ನೇ ಅಂತಸ್ತಿನಲ್ಲಿ ನಿರ್ಮಿಸಲು ಯೋಜನಾ ಅಭಿಯಂತರರಿಗೆ ಸೂಚಿಸಲಾಗಿರುತ್ತದೆ

12) ಸಿ.ಸಿ ಕ್ಯಾಮರಾಗಳ ಅಳವಡಿಸುವ ಬಗ್ಗೆ ಚರ್ಚಿಸಲಾಗಿರುತ್ತದೆ ಹಾಗೂ ರೆಫರಲ್ ಆಸ್ಪತ್ರೆಯಲ್ಲಿ ಲಿಫ್ಟ್ ಅಳವಡಿಸುವ ಕಾಮಗಾರಿಯನ್ನು ಪೂರ್ಣಗೊಳಿಸಲು ಸೂಚಿಸಲಾಗಿರುತ್ತದೆ.

13) ನಂದನವನ ಪಾರ್ಕ್ ನಿರ್ವಹಣೆ ಬಗ್ಗೆ ಮತ್ತು ಕಾವಲುಗಾರರನ್ನು ನೇಮಿಸುವ ಬಗ್ಗೆ ಚರ್ಚಿಸಲಾಗಿರುತ್ತದೆ.

*ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.*

*ವಾರ್ಡ್ ಸಮಿತಿ ಸಂಚಾಲಕರು*

*ವಾರ್ಡ್ 161 ರ ನೋಡಲ್ ಅಧಿಕಾರಿ.* 28/04/2021